# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IVA | ಬೆಂಗಳೂರು, ಶುಕ್ರವಾರ, ೧೦, ಜನವರಿ, ೨೦೨೫( ಪುಷ್ಯ , ೨೦, ಶಕವರ್ಷ, ೧೯೪೬)<br>BENGALURU, FRIDAY , 10, JANUARY , 2025 ( PUSHYA , 20, SHAKAVARSHA, 1946) | ನಂ. ೧೯<br>No. 19 |
|---|---|---|


**DEPARTMENT OF PARLIAMENTARY AFFAIRS AND LEGISLATION SECRETARIAT**
**NOTIFICATION**
**NO: DPAL 60 SHASANA 2024, BENGALURU, DATED:10.01.2025**

The Karnataka Labour Welfare Fund (Amendment) Bill, 2024 ಇದಕ್ಕೆ 2025ರ ಜನವರಿ ತಿಂಗಳ 08ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2025ರ ಕರ್ನಾಟಕ ಅಧಿನಿಯಮ ಸಂಖ್ಯೆ: 05 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ IV-A) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

## KARNATAKA ACT NO. 05 OF 2025

(First Published in the Karnataka Gazette Extra-ordinary on the 10th day of January, 2025)

### THE KARNATAKA LABOUR WELFARE FUND (AMENDMENT) ACT, 2024

(Received the assent of the Governor on the 08th day of January, 2025)

An Act further to amend the Karnataka Labour Welfare Fund Act, 1965.

Whereas it is expedient further to amend the Karnataka Labour Welfare Fund Act, 1965 (Karnataka Act 15 of 1965) for the purposes herein after appearing:

Be it enacted by the Karnataka State Legislature in the Seventy fifth year of the Republic of India as follows:-

**1. Short title and commencement.-** (1) This Act may be called the Karnataka Labour Welfare Fund (Amendment) Act, 2024.

(2) It shall come into force at once.

**2. Amendment of section 7A.-** In the Karnataka Labour Welfare Fund Act, 1965 (Karnataka Act 15 of 1965), in section 7A, in sub-section (2), for the words

"twenty rupees, forty rupees and twenty rupees", the words, "fifty rupees, one hundred rupees and fifty rupees" shall respectively be substituted.

**3. Power to remove difficulties.-** (1) If any difficulty arises in giving effect to the provisions of this Act, the Government may, by order published in the Official Gazette, make such provisions, not inconsistent with the provisions of this Act, as may appear to it to be necessary for removing the difficulty:

Provided that, no such order shall be made under this section after the expiry of a period of two years from the date of commencement of this Act.

(2) Every order made under this section shall be laid as soon as may be after it is made, before each house of the State Legislature.

By Order and in the name of
the Governor of Karnataka,
**G.SRIDHAR**
Secretary to Government
Department of Parliamentary
Affairs and Legislation

**<u>ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ</u>**
**<u>ಅಧಿಸೂಚನೆ</u>**
**<u>ಸಂಖ್ಯೆ: ಸಂವ್ಯಶಾಇ 60 ಶಾಸನ 2024, ಬೆಂಗಳೂರು, ದಿನಾಂಕ:10.01.2025</u>**

ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ, 2022 (2023 ರ ಕರ್ನಾಟಕ ಅಧಿನಿಯಮ ಸಂಖ್ಯೆ: 13) ರ ಪ್ರಕರಣ 6 ರಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ the Karnataka Labour Welfare Fund (Amendment) Act, 2024 (Karnataka Act 05 of 2025) ನ ಭಾಷಾಂತರವನ್ನು ಅಧಿಕೃತ ಕನ್ನಡ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ IV-A) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

**2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 05**

(2025 ರ ಜನವರಿ ತಿಂಗಳ 10ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ (ತಿದ್ದುಪಡಿ) ಅಧಿನಿಯಮ, 2024**

(2024 ರ ಜನವರಿ ತಿಂಗಳ 08ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮೋದನೆಯನ್ನು ಪಡೆಯಲಾಗಿದೆ)

ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಅಧಿನಿಯಮ, 1965ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಅಧಿನಿಯಮ, 1965ನ್ನು (1965ರ ಕರ್ನಾಟಕ ಅಧಿನಿಯಮ 15) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೈದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ (ತಿದ್ದುಪಡಿ) ಅಧಿನಿಯಮ, 2024 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪ್ರಕರಣ 7ಎ ರ ತಿದ್ದುಪಡಿ.-** ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಅಧಿನಿಯಮ, 1965ರ (1965ರ ಕರ್ನಾಟಕ ಅಧಿನಿಯಮ 15) 7ಎ ಪ್ರಕರಣದ (2)ನೇ ಉಪಪ್ರಕರಣದಲ್ಲಿರುವ "ಇಪ್ಪತ್ತು ರೂಪಾಯಿಗಳು, ನಲವತ್ತು ರೂಪಾಯಿಗಳು ಮತ್ತು ಇಪ್ಪತ್ತು ರೂಪಾಯಿಗಳ" ಎಂಬ ಪದಗಳಿಗೆ ಬದಲಾಗಿ "ಐವತ್ತು ರೂಪಾಯಿಗಳು, ಒಂದು ನೂರು ರೂಪಾಯಿಗಳು ಮತ್ತು ಐವತ್ತು ರೂಪಾಯಿಗಳ" ಎಂಬ ಪದಗಳನ್ನು ಅನುಕ್ರಮವಾಗಿ ಪ್ರತಿಯೋಜಿಸತಕ್ಕದ್ದು.

3. **ತೊಂದರೆಗಳನ್ನು ನಿವಾರಿಸುವ ಅಧಿಕಾರ**.- (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವಲ್ಲಿ ಏನಾದರೂ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು ಆದೇಶದ ಮೂಲಕ ತೊಂದರೆಯನ್ನು ನಿವಾರಿಸುವುದಕ್ಕಾಗಿ ಅವಶ್ಯಕವೆಂದು ಕಂಡುಬರುವ ಈ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ಅಧಿನಿಯಮದ ಉಪಬಂಧಗಳಿಗೆ ಅಸಂಗತವಲ್ಲದ ಏನನ್ನಾದರೂ ಅಗತ್ಯಪಡಿಸಬಹುದಾದ ಸಂದರ್ಭದಂತೆ ಉಪಬಂಧಗಳನ್ನು ಸರ್ಕಾರಿ ರಾಜ್ಯಪತ್ರದಲ್ಲಿ ಪ್ರಕಟಿಸಬಹುದು:

ಪರಂತು, ಈ ಅಧಿನಿಯಮದ ಪ್ರಾರಂಭದ ದಿನಾಂಕದಿಂದ ಎರಡು ವರ್ಷಗಳ ಅವಧಿಯ ಮುಕ್ತಾಯದ ತರುವಾಯ ಯಾವುದೇ ಅಂಥ ಆದೇಶವನ್ನು ಮಾಡತಕ್ಕದ್ದಲ್ಲ.

(2) ಈ ಪ್ರಕರಣದ ಅಡಿ ಮಾಡಿದ ಪ್ರತಿಯೊಂದು ಆದೇಶವನ್ನು, ಅದನ್ನು ಮಾಡಿದ ತರುವಾಯ ಸಾಧ್ಯವಾದಷ್ಟು ಬೇಗನೆ ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.

The above translation of the Karnataka Labour Welfare Fund (Amendment) Act, 2024 (Karnataka Act 05 of 2025) shall be an authoritative text in Kannada language under section 6 of the Kannada Language Comprehensive Development Act, 2022 (Karnataka Act No. 13 of 2023).

**ಥಾವರ್‌ಚಂದ್ ಗೆಹ್ಲೋಟ್**
**ಕರ್ನಾಟಕದ ರಾಜ್ಯಪಾಲರು**

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH